ಇಲಾಖೆ / ವಿಷಯ: DEPARTMENT / SUBJECT: ಮಾನ್ಯ ಸಭಾಧ್ಯಕ್ಷರು

ಪತ್ರಿಕೆಯ ಹೆಸರು : NAME OF THE NEWS PAPER : ವಿಜಯವಾಣಿ

ದಿನಾಂಕ : DATE : 03/07/2019

# ಸ್ಪೀಕರ್ ಕಚೇರಿ ತಲುಪದ ರಮೇಶ ರಾಜೀನಾಮೆ ಪತ್ರ

ಬೆಂಗಳೂರು: ಶಾಸಕ ಸ್ಥಾನಕ್ಕೆ ರಾಜೀನಾಮೆ ನೀಡಿದ್ದರು ಎಂದು ಹೇಳಲಾದ ರಮೇಶ್ ಜಾರಕಿಹೊಳಿ ರಾಜೀನಾಮೆ ಪತ್ರ ಸ್ಪೀಕರ್ ಕಚೇರಿಗೆ ತಲುಪಿಲ್ಲ. ಶಾಸಕ ಸ್ಥಾನಕ್ಕೆ ರಾಜೀನಾಮೆ ನೀಡಿ ರಾಜಕೀಯ ಸಂಚಲನಕ್ಕೆ ಕಾರಣವಾಗಿದ್ದ ರಮೇಶ್ ಜಾರಕಿಹೊಳಿ ಅವರು ರಾಜೀನಾಮೆ ಸಂಬಂಧ ಸ್ಪೀಕರ್ ರಮೇಶ್ ಕುಮಾರ್ ಅವರನ್ನೂ ಸಂಪರ್ಕಿಸಿಲ್ಲ. ರಾಜೀನಾಮೆ ನೀಡಲು ಬಯಸುವ ಶಾಸಕರು ಖುದ್ದಾಗಿ ಸ್ಪೀಕರ್ ಅವರನ್ನು ಭೇಟಿಯಾಗಿ ರಾಜೀನಾಮೆ ಪತ್ರ ಸಲ್ಲಿಸಬೇಕು. ಕೆಲವು ಸಂದರ್ಭಗಳಲ್ಲಿ ಫ್ಯಾಕ್ಸ್ ಮೂಲಕ ಸಲ್ಲಿಸಿದರೂ ಮತ್ತೆ ಖುದ್ದಾಗಿ ಭೇಟಿ ನೀಡಿ ಆ ಬಗ್ಗೆ ಸ್ಪಷ್ಟನೆ, ಸಮರ್ಥನೆ ನೀಡಲು ಅವಕಾಶ ಇರುತ್ತದೆ. ಆದರೆ, ರಮೇಶ್ ಜಾರಕಿಹೊಳಿ ಅವರ ರಾಜೀನಾಮೆ ಪತ್ರ ಸ್ಪೀಕರ್ ಕಚೇರಿಗೆ ತಲುಪಿಲ್ಲ. ಯಾರಿಗೆ, ಎಲ್ಲಿಗೆ ಕಳುಹಿಸಿದ್ದಾರೆ ಎಂಬುದೂ ಗೊತ್ತಿಲ್ಲ. ಈ ಮಧ್ಯೆ, ಕೋಲಾರದಲ್ಲಿ ಮಾತನಾಡಿದ ಸ್ಪೀಕರ್ ರಮೇಶ್‌ಕುಮಾರ್ ಅವರು, ರಮೇಶ್ ಜಾರಕಿಹೊಳಿ ರಾಜೀನಾಮೆ ನಮ್ಮ ಕಚೇರಿಗೂ ತಲುಪಿಲ್ಲ, ನನಗೂ ಕೊಟ್ಟಿಲ್ಲ ಎಂದು ಹೇಳಿದ್ದಾರೆ.